657 (472) ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಪ್ರಾಥಮಿಕ ಹಾಗೂ ಉನ್ನತ ಆಸ್ಪತ್ರೆಗಳ ಸಂಖ್ಯೆ ಎಷ್ಟು?

ಆ) ಪ್ರಾಥಮಿಕ ಹಾಗೂ ಉನ್ನತ ಆಸ್ಪತ್ರೆಗಳಲ್ಲಿ ಕೊರತೆ ಇರುವ ವೈದ್ಯರ ಸಂಖ್ಯೆ ಎಷ್ಟು?

ಇ) ಜಿಲ್ಲಾ ಆಸ್ಪತ್ರೆಗಳನ್ನು ನವೀಕರಣಗೊಳಿಸಲು ಕೈಗೊಂಡಿರುವ ಕ್ರಮಗಳೇನು?

ಈ) ಬೆಂಗಳೂರು, ಮೈಸೂರು, ಹುಬ್ಬಳ್ಳಿ, ಧಾರವಾಡಗಳಲ್ಲಿ ಇರುವ ಉನ್ನತ ಆಸ್ಪತ್ರೆಗಳು ಯಾವುವು?

ಉ) ಈ ಆಸ್ಪತ್ರೆಗಳನ್ನು ಆಧುನೀಕರಣಗೊಳಿಸಲು ಕೈಗೊಂಡಿರುವ ಕ್ರಮಗಳೇನು?

ಶ್ರೀ ಆರ್ ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ರಾಜ್ಯದಲ್ಲಿ ಒಟ್ಟು 579 ಪ್ರಾಥಮಿಕ ಆರೋಗ್ಯ ಘಟಕಗಳು, 1679 ಪ್ರಾಥಮಿಕ ಆರೋಗ್ಯ ಕೇಂದ್ರಗಳು, ತಾಲ್ಲೂಕು ಆಸ್ಪತ್ರೆಗಳನ್ನೊಳಗೊಂಡಂತೆ 301 ಸಮುದಾಯ ಆರೋಗ್ಯ ಕೇಂದ್ರಗಳು, 24 ಜಿಲ್ಲಾ ಆಸ್ಪತ್ರೆಗಳು ಹಾಗೂ 42 ಇತರೆ ಆಸ್ಪತ್ರೆಗಳು ಕಾರ್ಯನಿರ್ವಹಿಸುತ್ತಿವೆ ಹಾಗೂ ವೈದ್ಯಕೀಯ ಶಿಕ್ಷಣ ಇಲಾಖೆಯ ಅಡಿಯಲ್ಲಿ 9 ಉನ್ನತ ಆಸ್ಪತ್ರೆಗಳು ಇರುತ್ತವೆ

ಆ) ಪ್ರಾಥಮಿಕ ಹಾಗೂ ಉನ್ನತ ಆಸ್ಪತ್ರೆಗಳಲ್ಲಿ ಕೊರತೆ ಇರುವ ವೈದ್ಯರ ಸಂಖ್ಯೆ 781

ಇ) ಕೆಲವೊಂದು ಜಿಲ್ಲಾ ಆಸ್ಪತ್ರೆಗಳನ್ನು ವೈದ್ಯಕೀಯ ಮಹಾವಿದ್ಯಾಲಯವನ್ನಾಗಿ ಪರಿವರ್ತಿಸಲು ಕ್ರಮ ಕೈಗೊಂಡಿರುತ್ತದೆ ಇದರಿಂದ ಆಸ್ಪತ್ರೆಗಳಲ್ಲಿ ಹೆಚ್ಚಿನ ವೈದ್ಯಕೀಯ ಸೌಲಭ್ಯವನ್ನು ಸಾರ್ವಜನಿಕರಿಗೆ ನೀಡಲಾಗುತ್ತಿದೆ ಜಿಲ್ಲಾ ಆಸ್ಪತ್ರೆಗಳ ಹಾಸಿಗೆಗಳ ಸಾಮರ್ಥ್ಯವನ್ನು ಸಹ ಹೆಚ್ಚಿಸಿ ಅವುಗಳಿಗೆ ಬೇಕಾಗುವ ಹುದ್ದೆಗಳ ಮಂಜೂರಾತಿ ಕಟ್ಟಡ ಕಾಮಗಾರಿಗಳನ್ನು ಸಹ ತೆಗೆದುಕೊಳ್ಳಲು ಕ್ರಮ ಕೈಗೊಳ್ಳಲಾಗುತ್ತಿದೆ ಹಾಗೂ ವಿಶೇಷ ತಜ್ಞರನ್ನು ಮತ್ತು ವಿಶೇಷ ವೈದ್ಯಕೀಯ ಸೌಲಭ್ಯ ನೀಡುವ ಉಪಕರಣಗಳನ್ನು ಸಹ ಖರೀದಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಔಷಧಿ ಸರಬರಾಜನ್ನು ಕೊರತೆ ಇಲ್ಲದಂತೆ ಕ್ರಮ ಕೈಗೊಳ್ಳಲಾಗುತ್ತಿದೆ ಈ ಸೌಲಭ್ಯವನ್ನು ನೀಡುವುದರಿಂದ ಸಾರ್ವಜನಿಕರಿಗೆ ವಿಶೇಷ ವೈದ್ಯಕೀಯ ಸೌಲಭ್ಯವನ್ನು ನೀಡಲು ಅನುಕೂಲವಾಗುತ್ತಿದೆ

ಈ) ಬೆಂಗಳೂರು ನಗರದಲ್ಲಿ ವಿಕ್ಟೋರಿಯಾ ಆಸ್ಪತ್ರೆ, ಬೌರಿಂಗ್ ಮತ್ತು ಲೇಡಿಕರ್ಜನ್ ಆಸ್ಪತ್ರೆ, ಸರ್ಕಾರಿ ದಂತ ವೈದ್ಯಕೀಯ ಮಹಾ ವಿದ್ಯಾಲಯ, ವಾಣಿವಿಲಾಸ ಆಸ್ಪತ್ರೆ ಮಿಂಟೋ ಕಣ್ಣಾಸ್ಪತ್ರೆ, ಎಸ್ ಡಿ ಎಸ್ ಟಿಬಿ ಮತ್ತು ರಾಜೀವ್ ಗಾಂಧಿ ಎದೆ ರೋಗಗಳ ಆಸ್ಪತ್ರೆಗಳಿವೆ ಮೈಸೂರು ನಗರದಲ್ಲಿ ಕೆ ಆರ್ ಆಸ್ಪತ್ರೆ, ಚೆಲುವಾಂಬ ಮತ್ತು ಪಿ ಕೆ ಟಿ ಬಿ ಆಸ್ಪತ್ರೆ, ಇವುಗಳು ಇವೆ

ಹುಬ್ಬಳ್ಳಿ – ಧಾರವಾಡ ಅವಳಿ ನಗರದಲ್ಲಿ ಕರ್ನಾಟಕ ವೈದ್ಯಕೀಯ ವಿಜ್ಞಾನ ಸಂಸ್ಥೆ ಮತ್ತು ಮಾನಸಿಕ ರೋಗಿಗಳ ಆಸ್ಪತ್ರೆ ಧಾರವಾಡ ಇವುಗಳು ಇದ್ದು ಅದು ಸ್ವಾಯತ್ತ ಸಂಸ್ಥೆಯಾಗಿರುತ್ತದೆ

ಉ) ಅ) ವಿಕ್ಟೋರಿಯಾ ಮತ್ತು ಬೌರಿಂಗ್ ಆಸ್ಪತ್ರೆಗಳನ್ನು ಆಧುನೀಕರಣಗೊಳಿಸಲು ರೂ 48 00 ಕೋಟಿ ಮತ್ತು 42 00 ಕೋಟಿಗಳನ್ನು ಸರ್ಕಾರದ ಆದೇಶ ಸಂಖ್ಯೆ ಆಕುಕ 166 ಎಂಎಸ್ಎಫ್ 2006 ದಿನಾಂಕ 4–8–2006 ರಂದು ರೂ 30 00 ಕೋಟಿಗಳನ್ನು ಸರ್ಕಾರವು ಒದಗಿಸಿದೆ ಅಲ್ಲದೆ ಬಿ ಡಿ ಎ ವತಿಯಿಂದ ಹೊರರೋಗಿಗಳ ವಿಭಾಗ ಮತ್ತು ತುರ್ತು ಚಿಕಿತ್ಸಾ ವಿಭಾಗವನ್ನು ಬೌರಿಂಗ್ ಆಸ್ಪತ್ರೆಯಲ್ಲಿ ನಿರ್ಮಿಸಲಾಗಿದೆ

ಅಲ್ಲದೆ ಈ ಕೆಳಕಂಡ ಆಸ್ಪತ್ರೆಗಳಿಗೆ ಪ್ರಸಕ್ತ ಸಾಲಿನಲ್ಲಿ ದುರಸ್ತಿ ಮತ್ತು ಅಭಿವೃದ್ಧಿಗಾಗಿ ಈ ಕೆಳಕಂಡ ಮೊಬಲಗನ್ನು ಬಿಡುಗಡೆ ಮಾಡಲಾಗಿದೆ

ಕ್ರ ಸಂ.	ಆಸ್ಪತ್ರೆಯ ಹೆಸರು	ರೂ. ಲಕ್ಷಗಳಲ್ಲಿ
1	ವಿಕ್ಟೋರಿಯಾ ಆಸ್ಪತ್ರೆ	116 626
2	ಬೌರಿಂಗ್ ಮತ್ತು ಲೇಡಿಕರ್ಜನ್ ಆಸ್ಪತ್ರೆ	63 765
3	ವಾಣಿ ವಿಲಾಸ	12 86
4	ಮಿಂಟೋ ಕಣ್ಣಾಸ್ಪತ್ರೆ	28 60
5	ಎಸ್ ಡಿ ಎಸ್ ಟಿ ಬಿ ಮತ್ತು ರಾಜೀವ್ ಗಾಂಧಿ ಎದೆರೋಗಗಳ ಆಸ್ಪತ್ರೆ	155 97
6	ಕೆ ಆರ್ ಆಸ್ಪತ್ರೆ, ಮೈಸೂರು	34 51
7	ಚೆಲುವಾಂಬ ಆಸ್ಪತ್ರೆ	10 26
8	ಪಿ ಕೆ ಟಿ ಬಿ ಆಸ್ಪತ್ರೆ	34 25

ಆ) ರೋಗಿಗಳಿಗೆ ಉತ್ತಮ ಶುಶ್ರೂಷೆ ನೀಡುವ ಸಲುವಾಗಿ ವೈದ್ಯಕೀಯ ಶಿಕ್ಷಣ ವ್ಯಾಪ್ತಿಯಲ್ಲಿ ಬರುವ ಬೋಧಕ ಆಸ್ಪತ್ರೆಗಳಿಗೆ ಅತ್ಯಾವಶ್ಯಕವಾಗಿ ಬೇಕಾಗಿರುವ ಅತ್ಯಾಧುನಿಕ ವೈದ್ಯಕೀಯ ಉಪಕರಣಗಳನ್ನು ಖರೀದಿಸಲಾಗಿದೆ ಹಾಗೂ 2005–06 ರಲ್ಲಿ ವಿಕ್ಟೋರಿಯಾ ಆಸ್ಪತ್ರೆಯಲ್ಲಿ 24 ಗಂಟೆಗಳ ಕೇಂದ್ರೀಯ ಪ್ರಯೋಗ ಶಾಲಾ ಕಟ್ಟಡವನ್ನು ಕಟ್ಟಿಸಿ ಇನ್‌ಫೋಸಿಸ್ ರವರು ಉದಾರವಾಗಿ ದೇಣಿಗೆ ನೀಡಿದ್ದಾರೆ ಅದಕ್ಕೆ ಬೇಕಾದ ಪ್ರಯೋಗ ಶಾಲಾ ಸಾಧನ ಸಲಕರಣೆಗಳನ್ನು ಸುಮಾರು ರೂ 2 00 ಕೋಟಿ ಮೊತ್ತದಲ್ಲಿ ಒದಗಿಸಲಾಗಿದೆ ಮತ್ತು ಬೌರಿಂಗ್ ಮತ್ತು ಲೇಡಿ ಕರ್ಜನ್ ಆಸ್ಪತ್ರೆ, ಬೆಂಗಳೂರು ಇಲ್ಲಿಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಹೊರರೋಗಿಗಳ ವಿಭಾಗ ಮತ್ತು ತುರ್ತು ಚಿಕಿತ್ಸಾ ವಿಭಾಗವನ್ನು ನಿರ್ಮಿಸಲಾಗಿದ್ದು, ಇಲ್ಲಿ ಟ್ರಾಮಾ ಕೇರ್ ಸೆಂಟರ್ ಪ್ರಾರಂಭಿಸುವುದಕ್ಕೆ ಬೇಕಾದ ಅತ್ಯಾಧುನಿಕ ವೈದ್ಯಕೀಯ ಉಪಕರಣ ಮತ್ತು ಪೀರೋಪಕರಣಗಳನ್ನು ಸುಮಾರು ರೂ 2 00 ಕೋಟಿ ಮೊತ್ತದಲ್ಲಿ ಖರೀದಿಸಲು ಆದೇಶ ನೀಡಲಾಗಿದೆ ಸದರಿ ಉಪಕರಣಗಳು ಸರಬರಾಜು ಹಂತದಲ್ಲಿವೆ ಮತ್ತು ಶೀಘ್ರವೇ ಟ್ರಾಮಾಕೇರ್ ಸೆಂಟರ್‌ಗೆ ವಿಭಾಗವನ್ನು ಪ್ರಾರಂಭಿಸಲಾಗುವುದು

2005–06ರಲ್ಲಿ ವೈದ್ಯಕೀಯ ಶಿಕ್ಷಣ ವ್ಯಾಪ್ತಿಯಲ್ಲಿ ಬರುವ ಬೆಂಗಳೂರು ಮತ್ತು ಮೈಸೂರು ನಗರದ ಬೋಧಕ ಆಸ್ಪತ್ರೆಗಳಿಗೆ ರೂ 4,23,24,371=00 ಗಳ ವೆಚ್ಚದಲ್ಲಿ ವಿಕ್ಟೋರಿಯಾ ಆಸ್ಪತ್ರೆಯಲ್ಲಿ 24 ಗಂಟೆಗಳ ಕೇಂದ್ರೀಯ ಪ್ರಯೋಗ ಶಾಲೆ ಉಪಕರಣ ಸೇರಿ ಉಪಕರಣಗಳನ್ನು ಖರೀದಿಸಲಾಗಿದೆ ಇದರಿಂದ ರೋಗಿಗಳಿಗೆ ರೋಗ ತಪಾಸಣೆಗೆ ತುಂಬಾ ಉಪಯೋಗವಾಗುತ್ತದೆ ಹಾಗೂ 2006–07 ನೇ ಇಸವಿಯಲ್ಲಿ ಬೌರಿಂಗ್ ಮತ್ತು ಲೇಡಿ ಕರ್ಜನ್ ಆಸ್ಪತ್ರೆ, ಬೆಂಗಳೂರು ಟ್ರಾಮಾಕೇರ್ ಸೆಂಟರ್ ಪ್ರಾರಂಭಿಸುವುದಕ್ಕೆ ಬೇಕಾದ ಅತ್ಯಾಧುನಿಕ ವೈದ್ಯಕೀಯ ಉಪಕರಣಗಳನ್ನು ಮತ್ತು ಇತರೆ ಆಸ್ಪತ್ರೆಗಳಿಗೆ ಉಪಕರಣಗಳನ್ನು ಒಟ್ಟು ರೂ 7,81,26,550=00 ಗಳ ವೆಚ್ಚದಲ್ಲಿ ಖರೀದಿಸಲಾಗಿದೆ ಇವುಗಳಲ್ಲಿ ಮುಖ್ಯವಾಗಿ ಸಿ ಟಿ ಸ್ಕ್ಯಾನರ್, ಹೈ–ಎಂಡ್ ಎಕ್ಸರೇ, ಮತ್ತು ರಕ್ತ ನಿಧಿ ಉಪಕರಣಗಳು, ಸಿ–ಆರ್ಮ್ ಮತ್ತು ಮ್ಯಾಮೋಗ್ರಾಫಿ ಮುಂತಾದ ಅತ್ಯಾಧುನಿಕ ಉಪಕರಣಗಳನ್ನು ಸರಬರಾಜು ಮಾಡಲಾಗಿದೆ ಅಲ್ಲದೇ ಕೆ ಆರ್ ಆಸ್ಪತ್ರೆ, ಮೈಸೂರು ಇಲ್ಲಿನ 24 ಗಂಟೆಗಳ ಕೇಂದ್ರೀಯ ಪ್ರಯೋಗ ಶಾಲೆಗೆ ಬೇಕಾದ ಅತ್ಯಾಧುನಿಕ ವೈದ್ಯಕೀಯ ಉಪಕರಣಗಳನ್ನು ಖರೀದಿಸಲು ಮತ್ತು ಎಂ ಸಿ ಎ

ನಿಯಮಾವಳಿಗಳ ಪ್ರಕಾರ ಎಂ ಆರ್ ಐ ಈ ಉಪಕರಣವು ಅತ್ಯಾವಶ್ಯಕವಾಗಿ ಬೇಕಾಗಿರುವುದರಿಂದ ಕಲರ್ ಡಾಪ್ಲರ್ ಮತ್ತು ಇತರೆ ಅತ್ಯಾಧುನಿಕ ವೈದ್ಯಕೀಯ ಉಪಕರಣಗಳನ್ನು ಖರೀದಿಸಲು ಸಹ ಟೆಂಡರ್ ಕರೆಯಲಾಗಿದ್ದು, ಟೆಂಡರ್‌ನ ವಿವಿಧ ಹಂತದ ಪ್ರಕ್ರಿಯೆಗಳು ಮುಗಿದಿದ್ದು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವ ಹಂತದಲ್ಲಿದೆ ಹಾಗೂ ಕೆ ಆರ್ ಆಸ್ಪತ್ರೆ, ಮೈಸೂರು ಇಲ್ಲಿನ ಟ್ರಾಮಾ ಕೇರ್ ಸೆಂಟರ್ ಪ್ರಾರಂಭಿಸಲು ರೂ 150 00 ಲಕ್ಷಗಳಿಗೆ ಕೇಂದ್ರ ಸರ್ಕಾರದ ಸಹಾಯಾನುದಾನಕ್ಕಾಗಿ ಪ್ರಸ್ತಾವನೆ ಸಲ್ಲಿಸಲಾಗಿದೆ

658 (1069) ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಯಾವ ಯಾವ ಸಾಂಕ್ರಾಮಿಕ ರೋಗಗಳು ಹರಡುತ್ತಿವೆ?

ಆ) ಸಾಂಕ್ರಾಮಿಕ ರೋಗವನ್ನು ತಡೆಗಟ್ಟಲು ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ಯಾವ ರೀತಿಯ ಕ್ರಮವನ್ನು ಕೈಗೊಳ್ಳಲಾಗಿದೆ?

ಇ) ಇದಕ್ಕಾಗಿ ಪ್ರತಿ ವರ್ಷ ಮೀಸಲಿಡಲಾಗುತ್ತಿರುವ ಹಣ ಎಷ್ಟು?

ಈ) ಇದರಲ್ಲಿ ಖರ್ಚಾದ ಹಣ ಎಷ್ಟು?

ಶ್ರೀ ಆರ್ ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ರಾಜ್ಯದಲ್ಲಿ ಕಾಲರಾ, ಕರಳುಬೇನೆ, ವಿಷಮಶೀತ ಜ್ವರ, ಕಾಮಾಲೆ, ಮಂಗನಕಾಯಿಲೆ ಮತ್ತು ಇಲಿಜ್ವರ, ಚಿಕೂನ್ ಗುನ್ಯ ಇತ್ಯಾದಿ ಸಾಂಕ್ರಾಮಿಕ ರೋಗಗಳು ಆಗಾಗ ಸಂಭವಿಸುತ್ತಿವೆ

ಆ) **ಈ ಸಾಂಕ್ರಾಮಿಕ ರೋಗಗಳನ್ನು ತಡೆಗಟ್ಟಲು,**

ಜಿಲ್ಲಾ ಮಟ್ಟದಲ್ಲಿ

- ಜಿಲ್ಲಾ ಸಾಂಕ್ರಾಮಿಕ ರೋಗಗಳ ಕಣ್ಗಾವಲು ಘಟಕವು ಕುಡಿಯುವ ನೀರಿನಿಂದ ಹರಡುವ ರೋಗಗಳನ್ನು ತಡೆಯಲು ನೀರಿನ ಮಾದರಿಗಳನ್ನು ಸಂಗ್ರಹಿಸಿ ಪರೀಕ್ಷೆ ಮಾಡುತ್ತಿದೆ
- ಈ ಪರೀಕ್ಷೆ ಫಲಿತಾಂಶದ ಆಧಾರದ ಮೇಲೆ ಯೋಗ್ಯವಲ್ಲದ ನೀರಿನ ಮೂಲಗಳನ್ನು ತಕ್ಷಣ ಕ್ಲೋರಿನೇಷನ್ ಮಾಡಲಾಗುತ್ತಿದೆ